**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ,**
**ಕೆ.ಆರ್.ನಗರ .**

**<u>ಸಿ.ಸಿ ನಂಃ 309/ 2020</u>**

| | | |
|---|---|---|
| **ಸಾಕ್ಷಿಯ ಹೆಸರುಃ** | **ಬಸವರಾಜೇಗೌಡ** | **ಫ್ರಾಸಾಃ 2** |
| **ಗಂಡನ ಹೆಸರುಃ** | **ದೊಡ್ಡೇಗೌಡ** | **ಚಾಸಾಃ 1** |
| **ವಯಸ್ಸುಃ** | **58 ವರ್ಷ** | **ದಿಃ 25-05-2026** |
| **ಉದ್ಯೋಗಃ** | **ವ್ಯವಸಾಯ** | **ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.** |
| **ವಾಸ ಸ್ಥಳಃ** | **ಮಾಳನಾಯಕನಹಳ್ಳಿ ಗ್ರಾಮ** | |

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ</u>**

ಮೃತ ಮೂರ್ತಿ ಬಿನ್ ಶಿವರಾಮೇಗೌಡ ನನ್ನ ಅಕ್ಕನ ಮಗ. ಚಾಸಾ-4 ಮೃತ ಮೂರ್ತಿ ರವರ ಹೆಂಡತಿ. ಚಾಸಾ-5 ಮತ್ತು 6 ರವರು ಮೃತ ಮೂರ್ತಿ ರವರ ಮಕ್ಕಳು. ನನಗೆ ಆರೋಪಿಯ ಪರಿಚಯವಿಲ್ಲ. ಮೃತ ಮೂರ್ತಿ ಬಿನ್ ಶಿವರಾಮೇಗೌಡ ದಿಃ13.05.2019 ರಂದು ರಾತ್ರಿ 7.30 ಗಂಟೆಗೆ ಆದ ರಸ್ತೆ ಅಪಘಾತದಲ್ಲಿ ಮರಣ ಹೊಂದಿರುತ್ತಾರೆ. ಸದರಿ ಅಪಘಾತ ಯಾವ ರೀತಿ ಆಗಿದೆ ಮತ್ತು ಯಾರ ನಿರ್ಲಕ್ಷತನದಿಂದ ಆಗಿದೆ ಎಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಆರೋಪಿತರ ಪರಿಚಯ ನನಗೆ ಇರುವುದಿಲ್ಲ. ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನಾನು ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ.

**( ಈ ಹಂತದಲ್ಲಿ ಮಾನ್ಯ ಹಿ.ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ</u>**

ದಿಃ13.05.2019 ರಂದು ರಾತ್ರಿ 7.30 ಗಂಟೆಗೆ ಮೂರ್ತಿ ಬಿನ್ ಶಿವರಾಮೇಗೌಡ ರವರು ತಮ್ಮ ನೋಂದಣಿ ಆಗದ ದ್ವಿಚಕ್ರ ವಾಹನದಲ್ಲಿ ಮಿರ್ಲೆಗೆ ಹೋಗುತ್ತಿದ್ದಾಗ ಮಳೆ ಬಂದ ಕಾರಣ ಬೀಚನಹಳ್ಳಿ ಕೊಪ್ಪಲು ಗ್ರಾಮದ ಬಸ್ ನಿಲ್ದಾಣದ ಬಳಿ ತಮ್ಮ ಬೈಕನ್ನು ನಿಲ್ಲಿಸಲು ರಸ್ತೆ ಎಡಬದಿಯಲ್ಲಿ ಹೋಗುತ್ತಿದ್ದಾಗ ಆರೋಪಿಯು ತನ್ನ ಕೆಎ-45-ಆರ್-0355 ರ ವಾಹನವನ್ನು ಅತಿವೇಗ ಮತ್ತು ಅಲಕ್ಷತನದಿಂದ ಚಲಾಯಿಸಿಕೊಂಡು ಬಂದು ಮೂರ್ತಿ ಬಿನ್ ಶಿವರಾಮೇಗೌಡ ರವರು ಹೋಗುತ್ತಿದ್ದ ಮೋಟಾರ್ ಸೈಕಲ್ ಗೆ ಡಿಕ್ಕಿಪಡಿಸಿ ಅಪಘಾತಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಪಘಾತದ ಪರಿಣಾಮ ಮೂರ್ತಿ ಬಿನ್

ಶಿವರಾಮೇಗೌಡ ಮತ್ತು ಚಾಸಾ–2 ರವರು ತಮ್ಮ ಮೋಟಾರ್ ಸೈಕಲ್ ಸಮೇತ ಕೆಳಗೆ ಬಿದ್ದಿದ್ದು ಮೂರ್ತಿ ಮತ್ತು ಚಾಸಾ–2 ರವರಿಗೆ ತೀವ್ರವಾದ ಗಾಯವಾಗಿರುತ್ತದೆ ಎಂದರೆ ಸರಿಯಲ್ಲ. ನಂತರ ಅವರನ್ನು ಚಿಕಿತ್ಸೆಗಾಗಿ ಕೆ ಆರ್ ನಗರದ ಸರಕಾರಿ ಆಸ್ಪತ್ರೆಗೆ ಕಳುಹಿಸಿಕೊಂಟ್ಟಿರುತ್ತಾರ ಎಂದರೆ ಸರಿಯಲ್ಲ. ಅಪಘಾತ ಪಡಿಸಿದ ನಂತರದ ಆರೋಪಿಯು ತನ್ನ ವಾಹನವನ್ನು ಸ್ಥಳದಲ್ಲಿಯೇ ಬಿಟ್ಟು  ಓಡಿ ಹೋಗಿರುತ್ತಾನೆ ಎಂದರೆ ಸರಿಯಲ್ಲ. ಅಪಘಾತದಿಂದಾದ ಗಾಯಗಳಂದ ಚಿಕಿತ್ಸೆ ಫಲಾಕಾರಿಯಾಗದೇ ಅದೇ ದಿನ ಮೂರ್ತಿ ಬಿನ್ ಶಿವರಾಮೇಗೌಡ ರವರು ಮೈಸೂರಿನ ಕೆ.ಆರ್ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ.

ಸದರಿ ಘಟನೆಯ ಬಗ್ಗೆ ನಾನು ಪೋಲಿಸ ಠಾಣೆಯಲ್ಲಿ ಆರೋಪಿತರ ವಿರುದ್ಧ ದೂರನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ  ಈಗ ತಾನು ನೀಡಿದ ದೂರನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–3 ಎಂದು, ಹಾಗೂ ಸಾಕ್ಷಿಯ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ–3 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ಪೋಲಿಸರ ಹೇಳಿಕೆಯ ಮೇರೆಗೆ ತಾನು ನಿಪಿ–3 ರಲ್ಲಿ ತನ್ನ ಸಹಿಯನ್ನು ಹಾಕಿರುತ್ತೇನೆ ಎಂದು ಹಾಗೂ ನಿಪಿ–3 ರಲ್ಲಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ.

ಅಪಘಾತವು ಆರೋಪಿಯ ನಿರ್ಲಕ್ಷತನದಿಂದ ಆಗಿದೆ ಎಂದು ಗೊತ್ತಿದ್ದರೂ ಸಹ ಆರೋಪಿಯೊಜಂದಿಗೆ ರಾಜಿಯಾಗಿ  ಆರೋಪಿಗೆ ಸಹಾಯ ಮಾಡಳಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಃ ಆರೋಪಿ ಪರ ಶ್ರೀ ಎ.ಟಿ ವಕೀಲರಿಂದಃ**

**ಆರೋಪಿಪರ ವಕೀಲರು ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕಾಲಾವಕಾಶವನ್ನು ನೀಡಲು ಯಾವುದೇ ಸಕಾರಣಗಳಿಲ್ಲದ ಕಾರಣ ಆರೋಪಿಪರ ಪಾಟೀ ಸವಾಲು ಇಲ್ಲ ಎಂದು ತಗೆದುಕೊಳ್ಳಲಾಯಿತು.**

**ಮರುವಿಚಾರಣೆ ಃ ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**
**ಕೆ.ಆರ್.ನಗರ**